## ಕರ್ನಾಟಕ ಸರ್ಕಾರದ ನಡಾವಳಿಗಳು

ವಿಷಯ: 2014-15ನೇ ಸಾಲಿನಲ್ಲಿ ವಿಶೇಷ ವರ್ಗದವರಿಗೆ 10,000 ಮನೆಗಳನ್ನು ನಿರ್ಮಿಸುವ ಪ್ರತ್ಯೇಕ ಗುರಿ ನೀಡುವ ಬಗ್ಗೆ.

**ಓದಲಾಗಿದೆ:**

1. 2014-15ನೇ ಸಾಲಿನ ಮಾನ್ಯ ಮುಖ್ಯಮಂತ್ರಿಯವರ ಆಯವ್ಯಯ ಭಾಷಣದ ಕಂಡಿಕೆ 227.
2. ಸರ್ಕಾರದ ಆದೇಶ ಸಂಖ್ಯೆ:ವಸಇ 72 ಸಿಎಸ್ಎಸ್ 2014, ದಿನಾಂಕ:14.08.2014.
3. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ಇವರ ಪತ್ರ ಸಂಖ್ಯೆ: PI RGRHCL 03 SPL 01 2014, ದಿನಾಂಕ:05.03.2014.

**ಪ್ರಸ್ತಾವನೆ:**

ಮೇಲೆ ಓದಲಾಗಿರುವ (1)ರಲ್ಲಿ ಮಾನ್ಯ ಮುಖ್ಯಮಂತ್ರಿಯವರು 2014-15ನೇ ಸಾಲಿನ ಆಯವ್ಯಯದ ಭಾಷಣದ ಕಂಡಿಕೆ 227ರಲ್ಲಿ ಈ ಕೆಳಕಂಡಂತೆ ಘೋಷಣೆ ಮಾಡಿರುತ್ತಾರೆ.

> "2014-15ನೇ ಸಾಲಿನಲ್ಲಿ ವಿಶೇಷ ವರ್ಗದವರಿಗಾಗಿ ಅಂದರೆ ಕುಷ್ಠರೋಗದಿಂದ ಗುಣಮುಖರಾದವರು, ಹೆಚ್ಐವಿ ಸೋಂಕಿಗೆ ಒಳಗಾದವರು, ದೇವದಾಸಿಯರು, ಅಲೆಮಾರಿ ಜನಾಂಗದವರು, ಮತೀಯ ಗಲಭೆ ಹಾಗೂ ಚಳುವಳಿಗಳಿಂದ ಹಾನಿಗೊಳಗಾದವರು, ದೌರ್ಜನ್ಯಕ್ಕೆ ಒಳಗಾದವರು, ಜೀತದಿಂದ ಮುಕ್ತರಾದವರು, ವಿಧವೆಯರು ಇತ್ಯಾದಿಯವರಿಗೆ 10 ಸಾವಿರ ಮನೆಗಳನ್ನು ನಿರ್ಮಿಸುವ ಪ್ರತ್ಯೇಕ ಗುರಿಯನ್ನು ಹೊಂದಲಾಗಿದೆ".

ಮೇಲೆ ಓದಲಾಗಿರುವ (2)ರಲ್ಲಿ ರಾಜ್ಯದ ಕುಶಲಕರ್ಮಿಗಳಿಗೆ ವಿಶೇಷ ಗೃಹ ನಿರ್ಮಾಣ ಯೋಜನೆಯಡಿ 1000 ವಸತಿ ಕಾರ್ಯಾಗಾರಗಳನ್ನು (ಗುಂಪು ವಸತಿ ಕಾರ್ಯಾಗಾರ ಮತ್ತು ವೈಯಕ್ತಿಕ ವಸತಿ ಕಾರ್ಯಾಗಾರಗಳು ಸೇರಿದಂತೆ) ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದೊಂದಿಗೆ ಜಂಟಿಯಾಗಿ ಹಾಗೂ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಪಾಲು ರೂ.10.00 ಕೋಟಿಗಳ ವೆಚ್ಚದಲ್ಲಿ ನಿರ್ಮಿಸುವ ಯೋಜನೆಗೆ ಸರ್ಕಾರವು ಅನುಮೋದನೆ ನೀಡಿದೆ. ಈ ಕುಶಲಕರ್ಮಿಗಳಿಗೆ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯು ಪ್ರತಿ ವಸತಿ ಕಾರ್ಯಾಗಾರ ಘಟಕಕ್ಕೆ ನೀಡುವ ರೂ.1.00ಲಕ್ಷದ ಜೊತೆಗೆ ನಿಗಮವು ಫಲಾನುಭವಿಗಳಿಗೆ ನಿಗದಿಪಡಿಸಿರುವ ಸರ್ಕಾರದ ಸಹಾಯಧನ ರೂ.1.20ಲಕ್ಷ ಸೇರಿಸಿ ವಸತಿ ಕಾರ್ಯಾಗಾರವನ್ನು ನಿರ್ಮಿಸುವ ಹೊಣೆಗಾರಿಕೆಯನ್ನು ನಿಗಮಕ್ಕೆ ವಹಿಸಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯಲ್ಲಿ ಆದೇಶವನ್ನು ಹೊರಡಿಸಲಾಗಿದೆ.

ಮೇಲೆ ಓದಲಾಗಿರುವ (3)ರಲ್ಲಿ ವಿಶೇಷ ವರ್ಗದವರಿಗೆ ವಿಶೇಷ ವರ್ಗದ ಯೋಜನೆಯಡಿ ಗುರಿ ನಿಗದಿಪಡಿಸಿ, ಅನುಷ್ಠಾನಗೊಳಿಸುವ ಸಂಬಂಧ ಮಾರ್ಗಸೂಚಿಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ಇವರು ವಿವರವಾದ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ರಾಜ್ಯ ಸರ್ಕಾರವು ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಹಿಂದುಳಿದ ವಸತಿ ರಹಿತರಿಗೆ ವಸತಿ ಸೌಕರ್ಯವನ್ನು ಕಲ್ಪಿಸಲು ಹಲವಾರು ವಸತಿ ಯೋಜನೆಗಳನ್ನು ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮದ ಮೂಲಕ ಅನುಷ್ಠಾನಗೊಳಿಸುತ್ತಿದೆ. ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸುವ ಅನುದಾನಕ್ಕನುಗುಣವಾಗಿ ವಿವಿಧ ವಸತಿ ಯೋಜನೆಗಳಡಿ ಗುರಿಯನ್ನು ಸ್ಥಳೀಯ ಸಂಸ್ಥೆಗಳವಾರು ನಿಗದಿಪಡಿಸಲಾಗುತ್ತಿದೆ. ಆದಾಗ್ಯೂ ವಿಶೇಷ ವರ್ಗಕ್ಕೆ ಸೇರಿದವರಿಗೆ (ಮಾರ್ಗಸೂಚಿಯಲ್ಲಿರುವ ಪಟ್ಟಿಯಂತೆ) ವಸತಿ ಯೋಜನೆಗಳಡಿ ಮನೆ ಸಿಗದೆ ತೊಂದರೆಗೊಳಗಾಗುತ್ತಿರುವುದು ಕಂಡುಬಂದಿರುವುದರಿಂದ ವಿಶೇಷ ವರ್ಗದವರಿಗಾಗಿಯೇ 2014-15ನೇ ಸಾಲಿನಲ್ಲಿ 10,000 ಮನೆಗಳ ಗುರಿಯನ್ನು ನೀಡಲು ಉದ್ದೇಶಿಸಲಾಗಿದೆ. ವಿಶೇಷ ವರ್ಗದವರಿಗೆ ನೀಡಲಾಗಿರುವ ಮನೆಗಳ ಗುರಿಯನ್ನು ಹಂಚಿಕೆ ಮಾಡಲು ಮಾರ್ಗಸೂಚಿಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ವಇ 33 ಹೆಚ್‌ಎಹೆಚ್ 2013, ಬೆಂಗಳೂರು, ದಿನಾಂಕ:29.09.2014</u>**

2014-15ನೇ ಸಾಲಿನ ಆಯವ್ಯಯ ಭಾಷಣದ ಘೋಷಣೆಯಂತೆ ವಿಶೇಷ ವರ್ಗದವರಿಗಾಗಿ ಪ್ರಸಕ್ತ ಸಾಲಿನಲ್ಲಿ 10,000 ಮನೆಗಳ ಗುರಿಯನ್ನು ಹಾಗೂ ವಿಶೇಷ ವರ್ಗದ ಫಲಾನುಭವಿಗಳನ್ನು ಗುರ್ತಿಸಲು ಮತ್ತು ಈ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಅನುಬಂಧದಲ್ಲಿನ ಮಾರ್ಗಸೂಚಿಗಳಂತೆ ಮಂಜೂರಾತಿ ನೀಡಲಾಗಿದೆ.

ಈ 10,000 ಮನೆಗಳ ಗುರಿಯ ಪೈಕಿ 1000 ಮನೆಗಳ ಗುರಿಯನ್ನು ಕುಶಲಕರ್ಮಿ ಫಲಾನುಭವಿಗಳಿಗೆ ಮೀಸಲಿಡುವುದು. ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯು ವಿಶೇಷ ಗೃಹ ನಿರ್ಮಾಣ ಯೋಜನೆಯಡಿ ಕುಶಲಕರ್ಮಿ ಫಲಾನುಭವಿಗಳಿಗೆ ಪ್ರತಿ ಕಾರ್ಯಗಾರ ನಿರ್ಮಿಸಲು ನೀಡುವ ರೂ.1.00 ಲಕ್ಷದೊಂದಿಗೆ ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮವು ಪ್ರತಿ ಫಲಾನುಭವಿಗೆ ವಸತಿ ಯೋಜನೆಯಡಿ ನೀಡುವ ಸಹಾಯಧನ ರೂ.1.20 ಲಕ್ಷಗಳು ಸೇರಿ ವಸತಿ ಕಾರ್ಯಾಗಾರವನ್ನು ನಿರ್ಮಿಸುವ ಹೊಣೆಗಾರಿಕೆಯನ್ನು ನಿಗಮಕ್ಕೆ ವಹಿಸಿದೆ.

ಉಳಿದ 9000 ಮನೆಗಳ ಗುರಿಯನ್ನು ಬೇಡಿಕೆಗೆ ಅನುಗುಣವಾಗಿ ನಿಗಮವು ಜಿಲ್ಲಾವಾರು ಹಂಚಿಕೆಯನ್ನು ಮಾಡುವುದು.

2014-15ನೇ ಸಾಲಿನ ಆಯವ್ಯಯದಲ್ಲಿ ವಸತಿ ಯೋಜನೆಗೆ ಒದಗಿಸಿರುವ ಅನುದಾನದ ಮಿತಿಯಲ್ಲಿ ಈ 10,000 ಮನೆಗಳ ಗುರಿಯನ್ನು ಅನುಷ್ಠಾನಗೊಳಿಸುವ ಷರತ್ತನ್ನು ವಿಧಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ

(ಜಿ.ಶಂಕರಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ,
ವಸತಿ ಇಲಾಖೆ(ವಸತಿ-2)

<u>ಇವರಿಗೆ:</u>

1. ಪ್ರಧಾನ ಮಹಾಲೇಖಪಾಲರು, (ಎ & ಇ) (ಆಡಳಿತ-1&2) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
3. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ, ಬೆಂಗಳೂರು.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಎಲ್ಲಾ ವಿಭಾಗಾಧಿಕಾರಿಗಳು.
6. ಎಲ್ಲಾ ಮಹಾನಗರ ಪಾಲಿಕೆಗಳ ಆಯುಕ್ತರು.
7. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
8. ಎಲ್ಲಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳು.
9. ಎಲ್ಲಾ ತಾಲ್ಲೂಕು ತಹಶೀಲ್ದಾರರು.
10. ಎಲ್ಲಾ ಮುಖ್ಯಾಧಿಕಾರಿಗಳು ಪಟ್ಟಣ ಪಂಚಾಯ್ತಿ.
11. ಎಲ್ಲಾ ನಗರಸಭೆಗಳ ಆಯುಕ್ತರು.

(4–11: ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದ ಮುಖಾಂತರ)

12. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಚಿವ ಸಂಪುಟ (ಪ್ರಕರಣ ಸಂಖ್ಯೆ:486/2014), ವಿಧಾನಸೌಧ, ಬೆಂಗಳೂರು.
13. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-9), ವಿಧಾನಸೌಧ, ಬೆಂಗಳೂರು.
14. ಮಾನ್ಯ ವಸತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
15. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಸತಿ ಇಲಾಖೆ, ಬೆಂಗಳೂರು.
16. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕ, ವಸತಿ ಇಲಾಖೆ, ಬೆಂಗಳೂರು.